ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s. Kalyani Techpark Pvt. Ltd., ಕಂಪನಿಯವರಿಗೆ ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ಮಾಗಡಿ ಮತ್ತು ಗೋಜನೂರು ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ:KRED/08/KTPPL-10 MW/K-1306.

* * *

<u>ಪ್ರಸ್ತಾವನೆ :-</u>

M/s. Kalyani Techpark Pvt. Ltd., ಕಂಪನಿಯವರು ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ಮಾಗಡಿ ಮತ್ತು ಗೋಜನೂರು ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಸದರಿ ಕೋರಿಕೆಯನ್ನು ಪರಿಶೀಲಿಸಿ, ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ, ಸದರಿ ಕಂಪನಿಗೆ ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ಮಾಗಡಿ ಮತ್ತು ಗೋಜನೂರು ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಬಹುದೆಂದು, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ರವರು ಮೇಲೆ ಓದಲಾದ ಏಕ ಕಡತ ಪದ್ಧತಿಯಡಿಯಲ್ಲಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾನೆಯನ್ನು ಪರಿಶೀಲಿಸಿ, ಮುಂದಿನ ಹಂಚಿಕೆ ಸಮಿತಿ ಸಭೆಯಲ್ಲಿ ಮಂಡಿಸಿ ಘಟನ್ನೋತ್ತರ ಅನುಮೋದನೆ ಪಡೆಯಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 74 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ : 05.05.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, M/s. Kalyani Techpark Pvt. Ltd., ಕಂಪನಿಯವರಿಗೆ ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ಮಾಗಡಿ ಮತ್ತು ಗೋಜನೂರು ಗ್ರಾಮಗಳ 14 ಎಕರೆ 19 ಗುಂಟೆ ಜಮೀನಿನಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು **ಹಂಚಿಕೆ** ಮಾಡಿ ಆದೇಶಿಸಲಾಗಿದೆ.

Geographical area description for 10 MW capacity wind power project

| Sl. No. | Toposheet No. | Proposed Enhaced capacity in MW | Near by villages of the proposed area and district | Geographical Area Details of the Project |
|---|---|---|---|---|
| 1 | 48 M/8 | 10 MW (5 Nos x 2.0 MW) | Gojanur and Magadi Villages of Shirahatti Talluk, Gadag District. | The proposed area of M/s. Kalyani Techpark Private Limited is a part of already allotted area of M/s. Mimesis Wind Energy Private Limited. However, the company has to install the WTG's in the following Latitude and Longitude only.<br>WTG Locations No.1:<br>Latitude: 15°12'15.68" N,<br>Longitude : 75°29'19.30" E<br>R.S.No : 190/3 (Magadi Village) |

| | | | | |
|---|---|---|---|---|
| | | | | WTG Locations No.2:<br>Latitude: 15°12'32.82" N,<br>Longitude : 75°29'23.22" E<br>R.S.No : 194/3 (Magadi Village)<br><br>WTG Locations No.3:<br>Latitude: 15°12'43.78" N,<br>Longitude : 75°29'24.06" E<br>R.S.No : 204/2, 205/2 (Magadi Village)<br><br>WTG Locations No.4:<br>Latitude: 15°12'45.55" N,<br>Longitude : 75°30'22.25" E<br>R.S.No : 163/4 (Magadi Village)<br><br>WTG Locations No.5:<br>Latitude: 15°12'30.68" N,<br>Longitude : 75°30'13.71" E<br>R.S.No : 170/4 (Magadi Village) |
| | Total | 10 MW | | |

**Land details for capacity of 10 MW of M/s. Kalyani Techpark Pvt. Ltd.,**

| Sl.No | WTG Location No. | Village | Taluk | Revenue Suvey No. | Latitude | Longitude |
|---|---|---|---|---|---|---|
| 1 | 1 | Magadi | Shirahatti | 190/3 | 15°12'15.68"N | 75°29'19.30" E |
| 2 | 2 | Magadi | Shirahatti | 194/3 | 15°12'32.82"N | 75°29'23.22" E |
| 3 | 3 | Magadi | Shirahatti | 204/2 & 205/2 | 15°12'43.78"N | 75°29'24.06" E |
| 4 | 4 | Magadi | Shirahatti | 163/4 | 15°12'45.55"N | 75°30'22.25" E |
| 5 | 5 | Magadi | Shirahatti | 170/4 | 15°12'30.68"N | 75°30'13.71" E |

ಷರತ್ತುಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ : 06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

--3)

6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು ಮತ್ತು ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಆಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
9. ಸದರಿ ಪ್ರದೇಶದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಇಎನ್ 166 ಎನ್‌ಸಿಇ 2015, ದಿನಾಂಕ: 25.07.2015 ರಲ್ಲಿ ಈಗಾಗಲೇ ಮೆ: Mimesis Wind Energy Private Limited ಕಂಪನಿಯವರಿಗೆ ಹಂಚಿಕೆಯಾಗಿರುವ 12 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಮತ್ತು ಈ ಆದೇಶದಲ್ಲಿ 14 ಎಕರೆ 19 ಗುಂಟೆ ಜಮೀನಿನಲ್ಲಿ M/s. Kalyani Techpark Pvt. Ltd ಕಂಪನಿಯವರಿಗೆ ಹಂಚಿಕೆಯಾಗಿರುವ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳು ಒಂದಕ್ಕೊಂದು overlap ಆಗದಂತೆ ಅನುಷ್ಠಾನಗೊಳಿಸತಕ್ಕದ್ದು.
10. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.
11. ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ .ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.
12. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
05.04

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

**<u>ಪ್ರತಿ:</u>**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.
2. ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು - 560001
3. ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪಟ್ಟಿಗೆ ಸಂಖ್ಯೆ: 5329, ಬೆಂಗಳೂರು - 560001.